## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ.ಧನಂಜಯ ಸರ್ಜಿ , ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಪ್ರಸ್ತಾವನೆಗೆ ಹೇಳಿಕೆ

ಆಗಸ್ಟ್ 25 ರಂದು ರಾಜ್ಯ ಲೋಕಸೇವಾ ಆಯೋಗವು (ಕೆಪಿಎಸ್‌ಸಿ)ವು ಗೆಜೆಟೆಡ್ ಪ್ರೊಬೇಷನರಿಸ್ ಹುದ್ದೆಗಳಿಗೆ ನೇಮಕಾತಿ ಪೂರ್ವಭಾವಿ ಪರೀಕ್ಷೆಯನ್ನು ಆಗಸ್ಟ್ 25 ರ ಭಾನುವಾರ ನಡೆಸಲು ದಿನಾಂಕ ನಿಗದಿಮಾಡಿರುತ್ತದೆ. ಆದರೆ ಕೇಂದ್ರ ಸರ್ಕಾರದ ಬ್ಯಾಂಕಿಂಗ್ ಪರೀಕ್ಷೆ ಐ.ಬಿ.ಪಿ.ಎಸ್ (ಇನ್ಸ್ಟಿಟ್ಯೂಟ್ ಆಫ್ ಬ್ಯಾಂಕಿಂಗ್ ಪರ್ಸನಲ್ ಸೆಲೆಕ್ಷನ್) ನ್ನು ಅದೇ ದಿನದಂದು ನಡೆಸುತ್ತಿರುವುದು ಅದರಲ್ಲೂ ಈ ಭಾರಿ ನಮ್ಮೆಲ್ಲರ ಒತ್ತಾಯದಂತೆ ಕನ್ನಡದಲ್ಲಿ ಐ.ಬಿ.ಪಿ.ಎಸ್ ಪರೀಕ್ಷೆ ಬರೆಯಲು ಅವಕಾಶವಿದ್ದು, ಈಗಾಗಲೇ ಅರ್ಜಿ ಸಲ್ಲಿಸಿರುವ ರಾಜ್ಯದ 50000ಕ್ಕೂ ಹೆಚ್ಚು ಪದವೀಧರ ಅಭ್ಯರ್ಥಿಗಳು ಒಂದೇ ದಿನ ನಡೆಯುವ ಪರೀಕ್ಷೆಗಳಿಂದ ಗೊಂದಲಕ್ಕೆ ಒಳಗಾಗಿದ್ದಾರೆ.

ರಾಜ್ಯದ ಲಕ್ಷಾಂತರ ಪರೀಕ್ಷಾ ಅಭ್ಯರ್ಥಿಗಳು ಇದರಿಂದ ಅವಕಾಶ ವಂಚಿತರಾಗಲಿದ್ದಾರೆ ಇದೊಂದು ಅತ್ಯಂತ ಗಂಭೀರ ವಿಷಯವಾಗಿದ್ದು ರಾಜ್ಯ ಸರ್ಕಾರ ಕೂಡಲೇ ಕೆ.ಪಿ.ಎಸ್.ಸಿ ಯು ದಿನಾಂಕ: 25.08.2024 ರಂದು ನಿಗದಿಪಡಿಸಿರುವ ಗೆಜೆಟೆಡ್ ಪ್ರೊಬೇಷನರಿಸ್ ಹುದ್ದೆಗಳ (ಕೆ.ಎ.ಎಸ್) ಪೂರ್ವಭಾವಿ ಪರೀಕ್ಷೆಯನ್ನು ಈ ಕೂಡಲೇ ಮುಂದೂಡಿ ದಿನಾಂಕವನ್ನು ಮರುನಿಗದಿಗೊಳಿಸುವಂತೆ ಮಾನ್ಯ ಮುಖ್ಯಮಂತ್ರಿಗಳನ್ನು ವಿನಂತಿಸುತ್ತೇನೆ.

ನಾನು ಸನ್ಮಾನ್ಯ ಸಭಾಪತಿಯವರ ಮೂಲಕ ಸರ್ಕಾರವನ್ನು ಆಗ್ರಹಿಸುವುದೇನೆಂದರೇ, ಈ ರೀತಿಯ ಗೊಂದಲದ ನಿರ್ಣಯಗಳಿಂದ ರಾಜ್ಯದ ಪದವೀಧರ ಅಭ್ಯರ್ಥಿಗಳು ಅವಕಾಶ ವಂಚಿತರಾಗುವುದನ್ನು ತಡೆಗಟ್ಟುವ ದೃಷ್ಟಿಯಿಂದ ಕೆ.ಪಿ.ಎಸ್.ಸಿ ಯು ಪರೀಕ್ಷೆಗಳಿಗೆ ದಿನಾಂಕ ನಿಗದಿಗೊಳಿಸುವ ಸಮಯದಲ್ಲಿ ಕೇಂದ್ರ ಸರ್ಕಾರದ ಪ್ರಮುಖ ಪರೀಕ್ಷಾ (ಬ್ಯಾಂಕಿಂಗ್ ಸೇರಿದಂತೆ) ದಿನಾಂಕಗಳನ್ನು ಹೊರತುಪಡಿಸಿ ದಿನಾಂಕ ನಿಗದಿಮಾಡಿ ರಾಜ್ಯದ ಸ್ಥಳೀಯ ಪದವೀಧರ ನಿರುದ್ಯೋಗಿ ಅಭ್ಯರ್ಥಿಗಳ ಹಿತ ಕಾಪಾಡಲು ಅಗತ್ಯ ಕ್ರಮಕೈಗೊಳ್ಳುವಂತೆ ಶೂನ್ಯವೇಳೆಯಲ್ಲಿ ಸರ್ಕಾರವನ್ನು ಒತ್ತಾಯಿಸುತ್ತೇನೆ.

### ಸರ್ಕಾರದ ಹೇಳಿಕೆ

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:26-02-2024ರಂದು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಒಟ್ಟು 384 ಹುದ್ದೆಗಳಿಗೆ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ದಿನಾಂಕ: 05-05-2024 ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲು ದಿನಾಂಕ ನಿಗದಿಪಡಿಸಲಾಗಿತ್ತು. ಆದರೆ ಚುನಾವಣಾ ನೀತಿ ಸಂಹಿತೆ ಜಾರಿಯಾದ್ದರಿಂದ ಸದರಿ ಪರೀಕ್ಷೆಯನ್ನು ಮುಂದೂಡಿ ದಿನಾಂಕ:21-07-2024ರಂದು ನಡೆಸಲು ಮರುನಿಗದಿಪಡಿಸಲಾಗಿತ್ತು.

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 44 ಎಸ್‌ಎಸ್‌ಸಿ 2024, ದಿನಾಂಕ:21-06-2024ರಲ್ಲಿ 2017-18ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ನೇಮಕಾತಿ ಪರೀಕ್ಷೆಗೆ ಅರ್ಜಿ ಸಲ್ಲಿಸಿದ್ದ ಎಲ್ಲಾ ಅಭ್ಯರ್ಥಿಗಳಿಗೆ ವಯಸ್ಸಿನ ನಿರ್ಬಂಧವಿಲ್ಲದೆ ಒಂದು ಬಾರಿಗೆ ಸೀಮಿತಗೊಳಿಸಿ ಅರ್ಜಿ ಸಲ್ಲಿಸಲು ಹೆಚ್ಚುವರಿ ವಿಶೇಷ ಅವಕಾಶವನ್ನು ನೀಡಿ, 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕರ್ನಾಟಕ ಲೋಕಸೇವಾ ಆಯೋಗವು 15 ದಿನಗಳ ಕಾಲಾವಕಾಶವನ್ನು ನೀಡುವಂತೆ ಆದೇಶಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ:25-08-2024ರಂದು ನಡೆಸಲು ಮತ್ತೊಮ್ಮೆ ಮರುನಿಗದಿಪಡಿಸಲಾಗಿರುತ್ತದೆ.

ಆಯೋಗವು ನಡೆಸುವ ವಿವಿಧ ನೇಮಕಾತಿ ಪರೀಕ್ಷೆಗಳ ಪರೀಕ್ಷಾ ದಿನಾಂಕವನ್ನು ನಿಗದಿಪಡಿಸುವ ಮುನ್ನ ಆಯೋಗದಲ್ಲಿ ಸ್ವೀಕೃತವಾದ ಪ್ರಮುಖ ಕೇಂದ್ರ ಪರೀಕ್ಷಾ ಪ್ರಾಧಿಕಾರಿಗಳಾದ ಕೇಂದ್ರ ಲೋಕಸೇವಾ ಆಯೋಗ (ಯು.ಪಿ.ಎಸ್.ಸಿ.), ಸ್ಟಾಫ್ ಸೆಲೆಕ್ಷನ್ ಕಮಿಷನ್ (ಎಸ್.ಎಸ್.ಸಿ) ಹಾಗೂ ರಾಜ್ಯದ ಪರೀಕ್ಷಾ ಪ್ರಾಧಿಕಾರಿಗಳಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ.) ಮತ್ತು ಇನ್ನಿತರೆ ಪ್ರಾಧಿಕಾರಗಳಿಂದ ನಿಗದಿಪಡಿಸಲಾದ ಪರೀಕ್ಷಾ ದಿನಾಂಕಗಳ ಕುರಿತಂತಹ ಮಾಹಿತಿಗಳನ್ನು ಪರಿಶೀಲಿಸಿದ ನಂತರವೇ ಪರೀಕ್ಷಾ ದಿನಾಂಕವನ್ನು ನಿಗದಿಪಡಿಸಲಾಗುವುದು. ಮೇಲ್ಕಂಡ ಪರೀಕ್ಷಾ ಪ್ರಾಧಿಕಾರಗಳಿಂದ ಪರೀಕ್ಷಾ ದಿನಾಂಕಗಳ ಕುರಿತಂತಹ ಮಾಹಿತಿಯು ನಿರಂತರವಾಗಿ ಆಯೋಗದಲ್ಲಿ ಸ್ವೀಕೃತವಾಗುತ್ತದೆ.

ಅದರಂತೆ ದಿನಾಂಕ:25-08-2024ರಂದು ಸದರಿ ಸಂಸ್ಥೆಗಳಿಂದ ಯಾವುದೇ ಪರೀಕ್ಷೆಗಳು ನಿಗದಿಯಾಗದೇ ಇರುವ ಹಿನ್ನೆಲೆಯಲ್ಲಿ ಪೂರ್ವಭಾವಿ ಪರೀಕ್ಷೆಯ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಬ್ಯಾಂಕಿಂಗ್ ಪರೀಕ್ಷೆ ಐ.ಬಿ.ಪಿ.ಎಸ್. (ಇನ್‌ಸ್ಟಿಟ್ಯೂಟ್ ಆಫ್ ಬ್ಯಾಂಕಿಂಗ್ ಪರ್ಸೋನೆಲ್ ಸೆಲೆಕ್ಷನ್) ಪರೀಕ್ಷೆ ನಿಗದಿಯಾಗಿರುವ ಕುರಿತು ಆಯೋಗಕ್ಕೆ ಯಾವುದೇ ಮಾಹಿತಿಯು ಲಭ್ಯವಿರಲಿಲ್ಲ. ಇದಲ್ಲದೆ ಸದರಿ ಹುದ್ದೆಗಳ ಅಧಿಸೂಚನೆಯನ್ನು ದಿನಾಂಕ:01-07-2024ರಂದು ಹೊರಡಿಸಲಾಗಿದ್ದು, ಸದರಿ ಅಧಿಸೂಚನೆಯಲ್ಲಿಯೂ ಪೂರ್ವಭಾವಿ ಪರೀಕ್ಷೆಯನ್ನು 2024ರ ಆಗಸ್ಟ್ ತಿಂಗಳಲ್ಲಿ ನಡೆಸಲಾಗುವುದು ಎಂದು ನಮೂದಾಗಿರುತ್ತದೆ. ಆದರೆ ಆಯೋಗದ ಪೂರ್ವಭಾವಿ ಪರೀಕ್ಷೆಯ ವೇಳಾಪಟ್ಟಿಯನ್ನು ದಿನಾಂಕ:27-06-2024ರಂದೇ ಪ್ರಕಟಿಸಲಾಗಿತ್ತು.

ಮುಂದುವರೆದು, ದಿನಾಂಕ:25-08-2024ರಂದು ನಿಗದಿಯಾಗಿರುವ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಪೂರ್ವಭಾವಿ ಪರೀಕ್ಷೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸುಮಾರು 700 ಪರೀಕ್ಷಾ ಉಪಕೇಂದ್ರಗಳಿಂದ ಒಪ್ಪಿಗೆ ಪತ್ರಗಳನ್ನು ಪಡೆಯಲಾಗಿದ್ದು, ಸದರಿ ಉಪಕೇಂದ್ರಗಳ ಯಾವುದೇ ಮುಖ್ಯಸ್ಥರುಗಳು ಸದರಿ ದಿನಾಂಕದಂದು ಐ.ಬಿ.ಪಿ.ಎಸ್. ಪರೀಕ್ಷೆ ಇರುವ ಕಾರಣದಿಂದಾಗಿ ಒಪ್ಪಿಗೆ ಪತ್ರ ನೀಡಲು ನಿರಾಕರಿಸದೆ ಎಲ್ಲರು ಪರೀಕ್ಷೆಯನ್ನು ನಡೆಸಲು ಒಪ್ಪಿಗೆ ಸೂಚಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಸದರಿ ದಿನಾಂಕದಂದು ಪೂರ್ವಭಾವಿ ಪರೀಕ್ಷೆ ನಡೆಸಲು ಎಲ್ಲಾ ರೀತಿಯ ಪೂರ್ವ ಸಿದ್ಧತೆಗಳನ್ನು ಸಹ ಈಗಾಗಲೇ ಮಾಡಿಕೊಳ್ಳಲಾಗುತ್ತಿದೆ.

ಗೆಜೆಟೆಡ್ ಪ್ರೊಬೇಷನರ್ ನೇಮಕಾತಿಯನ್ನು ಪೂರ್ವಭಾವಿ ಪರೀಕ್ಷೆ, ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನೊಳಗೊಂಡಂತೆ ಮೂರು ಹಂತಗಳಲ್ಲಿ ನಡೆಸಲಾಗುತ್ತದೆ. ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು, 1997ರನ್ವಯ ಅಧಿಸೂಚನೆ ಹೊರಡಿಸಿದ ಒಂದು ವರ್ಷದೊಳಗೆ ನೇಮಕಾತಿಯನ್ನು ಪೂರ್ಣಗೊಳಿಸಬೇಕಿದ್ದು, ಸದರಿ ನೇಮಕಾತಿಯ ಪೂರ್ವಭಾವಿ ಪರೀಕ್ಷೆಯನ್ನು ಈಗಾಗಲೇ ಎರಡು ಬಾರಿ ಮುಂದೂಡಲಾಗಿದ್ದು, ಇದೇ ರೀತಿ ಪದೇ ಪದೇ ಪರೀಕ್ಷಾ ದಿನಾಂಕವನ್ನು ಮುಂದೂಡಿದಲ್ಲಿ ನಿಗದಿತ ಕಾಲಾವಧಿಯೊಳಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಕಷ್ಟಸಾಧ್ಯವಾಗುತ್ತದೆ.

**ಸಂಖ್ಯೆ: ಸಿಆಸುಇ 104 ಎಸ್ ಎಸ್ ಸಿ 2024**

**ಸಿದ್ದರಾಮಯ್ಯ**
**(ಮುಖ್ಯಮಂತ್ರಿ)**